**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ:ಡಿಟಿಇ 3 ಸಿಡಿಸಿ(1) 2024 (1309601)

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ,
ಬೆಂಗಳೂರು-560001,
ದಿನಾಂಕ:28-02-2024.

**-:ಜ್ಞಾಪನ:-**

**ವಿಷಯ:-** ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ರಾಮನಗರದಲ್ಲಿ "ಟೊಯೊಟಾ ಸೆಂಟರ್ ಆಫ್ ಎಕ್ಸಲೆನ್ಸ್" ಸ್ಥಾಪಿಸುವ ಬಗ್ಗೆ.

**ಉಲ್ಲೇಖ:-** ತಾಂತ್ರಿಕ ಶಿಕ್ಷಣ ಇಲಾಖೆ ಮತ್ತು ಟೊಯೊಟಾ ಕಿರ್ಲೋಸ್ಕರ್ ಲಿ. ಸಂಸ್ಥೆ ನಡುವೆ ಏರ್ಪಟ್ಟ ಒಡಂಬಡಿಕೆ.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಒಡಂಬಡಿಕೆಯನ್ವಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ರಾಮನಗರದಲ್ಲಿ ವಿದ್ಯಾರ್ಥಿಗಳಿಗೆ ಕೌಶಲ್ಯ ತರಬೇತಿ ನೀಡಲು ಟೊಯೊಟಾ ಕಿರ್ಲೋಸ್ಕರ್ ಲಿ. ಸಂಸ್ಥೆಯು ಉಚಿತವಾಗಿ "ಟೊಯೊಟಾ ಸೆಂಟರ್ ಆಫ್ ಎಕ್ಸಲೆನ್ಸ್ ಕೇಂದ್ರ"ವನ್ನು ಸ್ಥಾಪಿಸಲು ಸಂಸ್ಥೆಯ ಪ್ರಾಚಾರ್ಯರು ಟೊಯೊಟಾ ಕಿರ್ಲೋಸ್ಕರ್ ಲಿ. ಸಂಸ್ಥೆಗೆ ಸಂಪೂರ್ಣ ಸಹಕಾರ ನೀಡಲು ಸೂಚಿಸಿದೆ.

ಉದ್ದೇಶಿತ "ಟೊಯೊಟಾ ಸೆಂಟರ್ ಆಫ್ ಎಕ್ಸಲೆನ್ಸ್" ಕೇಂದ್ರವನ್ನು ಸ್ಥಾಪಿಸಿದ ನಂತರ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ರಾಮನಗರ ಸಂಸ್ಥೆಯ ಉಪನ್ಯಾಸಕರುಗಳು ತರಬೇತಿಯನು ಟೊಯೊಟಾ ಕಿರ್ಲೋಸ್ಕರ್ ಲಿ.ರವರ ಸಹಕಾರದೊಂದಿಗೆ ಪಡೆದು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ರಾಮನಗರ, ಸರ್ಕಾರಿ ಪಾಲಿಟೆಕ್ನಿಕ್ ರಾಮನಗರ ಮತ್ತು ಸರ್ಕಾರಿ ಪಾಲಿಟೆಕ್ನಿಕ್ ಚನ್ನಪಟ್ಟಣ ಸಂಸ್ಥೆಗಳ ಮೆಕ್ಯಾನಿಕಲ್ ಹಾಗೂ ಆಟೋಮೊಬೈಲ್ ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ತರಬೇತಿ ನೀಡುವ ನಿಟ್ಟಿನಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ರಾಮನಗರ ಸಂಸ್ಥೆಯ ಮೆಕ್ಯಾನಿಕಲ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರನು ಸಂಯೋಜನಾಧಿಕಾರಿಯನ್ನಾಗಿ ನೇಮಿಸಿ, "ಟೊಯೊಟಾ ಸೆಂಟರ್ ಆಫ್ ಎಕ್ಸಲೆನ್ಸ್" ಕೇಂದ್ರದ ಮೂಲಕ ತರಬೇತಿಯನ್ನು ವಿದ್ಯಾರ್ಥಿಗಳಿಗೆ ನೀಡಲು ಕ್ರಮ ವಹಿಸಲು ಈ ಮೂಲಕ ಸೂಚಿಸಿದೆ.

Signed by
Prasanna H.
ನಿರ್ದೇಶಕರು
Date: 04-03-2024 16:52:24

ಇವರಿಗೆ:

ಪ್ರಾಚಾರ್ಯರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ರಾಮನಗರ:- ಸೂಕ್ತ ಕ್ರಮಕ್ಕಾಗಿ.

ಪ್ರತಿ:

1. ಮಾನ್ಯ ಆಯುಕ್ತರ ಆಪ್ತ ಶಾಖೆ:- ಮಾಹಿತಿಗಾಗಿ.
2. ಮಾನ್ಯ ನಿರ್ದೇಶಕರ ಆಪ್ತ ಶಾಖೆ:- ಮಾಹಿತಿಗಾಗಿ.
3. ಪ್ರಾಚಾರ್ಯರು, ಸರ್ಕಾರಿ ಪಾಲಿಟೆಕ್ನಿಕ್ ರಾಮನಗರ ಮತ್ತು ಚನ್ನಪಟ್ಟಣ- ಸೂಕ್ತ ಕ್ರಮಕ್ಕಾಗಿ.
4. ಕಡತಕ್ಕೆ